ಪ್ರತಿಬಿಂಬ

PRATIBIMBA –Multidisciplinary Kannada Research Journal of IIMRD
ISSN: 2582-2284
Vol-5 Issue 1, July-August, 2023, Pp. 106-116
©*IIMRD*, Mysuru

IIMRD JOURNALS
www.iimrd.com

# ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳ ಅಭಿವೃದ್ಧಿಯಲ್ಲಿ ಕರ್ನಾಟಕ ಸರ್ಕಾರದ ಪಾತ್ರ: (2018–2023)

**ಮಂಜುನಾಥ ಜೆ***

*ಸಂಶೋಧನಾ ವಿದ್ಯಾರ್ಥಿ, ಇತಿಹಾಸ ಮತ್ತು ಪುರಾತತ್ವ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ತುಮಕೂರು ವಿಶ್ವವಿದ್ಯಾಲಯ, ತುಮಕೂರು.

**ಸಾರಾಂಶ: (Abstract)**

*ಕರ್ನಾಟಕ ರಾಜ್ಯವೂ ಪರಿಶಿಷ್ಟ ಪಂಗಡದ ಜನರ ಅಭಿವೃದ್ಧಿಗಾಗಿ ಅನೇಕ ಯೋಜನೆಗಳನ್ನು 35 ಇಲಾಖೆಗಳ ಮೂಲಕ ಅನುಷ್ಠಾನಗೊಳಿಸುತ್ತಿದೆ. ಟಿಎಸ್‌ಪಿ ಕಾಯ್ದೆಯ ಅಡಿಯಲ್ಲಿ ಎಲ್ಲಾ ಇಲಾಖೆಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಕಾರ್ಯಕ್ರಮಗಳನ್ನು ಜಾರಿಗೊಳಿಸುತ್ತಿವೆ. ಇದರಿಂದ ಪರಿಶಿಷ್ಟ ಪಂಗಡದ ಜನರು ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ, ರಾಜಕೀಯವಾಗಿ ಅಭಿವೃದ್ಧಿಯ ದಾಪುಗಾಲು ಇಡುತ್ತಿದ್ದಾರೆ. ಆದರೆ ರಾಜ್ಯ ಸರ್ಕಾರ ಜಾರಿಗೊಳಿಸಿರುವ ಯೋಜನೆಗಳು, ಸೌಲಭ್ಯಗಳು ಸರಿಯಾಗಿ ಸರಿಯಾದ ಫಲಾನುಭವಿಗಳಿಗೆ ತಲುಪುತ್ತಿಲ್ಲ. ಇದಕ್ಕೆ ಬೇರೆ ಬೇರೆ ಕಾರಣಗಳಿವೆ. ಅವುಗಳಲ್ಲಿ ಮುಖ್ಯವಾದವುಗಳೆಂದರೆ ಪರಿಶಿಷ್ಟ ಪಂಗಡದ ಜನರಲ್ಲಿನ ಅನಕ್ಷರತೆ, ತಾಂತ್ರಿಕ ಮಾಹಿತಿ ಸರಿಯಾಗಿ ದೊರೆಯದೆ ಇರುವುದು ಇವೆಲ್ಲಾ ಕಾರಣಗಳಿಂದ ಸರ್ಕಾರದ ಸೌಲಭ್ಯಗಳು ಸರಿಯಾಗಿ ಉಪಯೋಗವಾಗುತ್ತಿಲ್ಲ. ಹಾಗೆಯೇ ಕೆಲವೇ ಜನರು ಮಾತ್ರ ಪ್ರಭಾವಿ ವ್ಯಕ್ತಿಗಳ ಸಂಪರ್ಕ ಇರುವವರು ಮಾತ್ರ ಸೌಲಭ್ಯಗಳನ್ನು ಪಡೆಯುತ್ತಿದ್ದಾರೆ. ಜನ ಸಾಮಾನ್ಯರಿಗೆ ಯೋಜನೆಗಳು ಗೊತ್ತಿದ್ದರೂ ಅವುಗಳ ಲಾಭ ಪಡೆಯಲಿಕ್ಕೆ ಆಗುತ್ತಿಲ್ಲ. ಕಾರಣ ಭ್ರಷ್ಟಾಚಾರದಂತಹ ಸಮಸ್ಯೆಗಳು ಕೂಡ ಕಾರಣವಾಗುತ್ತಿವೆ. ಪರಿಶಿಷ್ಟ ಪಂಗಡದ ಜನರ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ ವಿಶೇಷವಾಗಿ ಶೈಕ್ಷಣಿಕ ಯೋಜನೆಗಳು ಮತ್ತು ಕಳೆದ 5 ವರ್ಷಗಳಲ್ಲಿ ಸರ್ಕಾರ ಮಾಡಿರುವ ಅಭಿವೃದ್ಧಿ ಕಾರ್ಯಗಳನ್ನು ವಿಶ್ಲೇಷಿಸುವ ಉದ್ದೇಶವನ್ನು ಈ ಲೇಖನ ಹೊಂದಿದೆ.*

**ಮುಖ್ಯಪದಗಳು (Keywords):** ಪರಿಶಿಷ್ಟ ಪಂಗಡ, ಕರ್ನಾಟಕ ಸರ್ಕಾರ, ಯೋಜನೆಗಳು, ಸಬಲೀಕರಣ.

## ಪೀಠಿಕೆ

ಕರ್ನಾಟಕ ರಾಜ್ಯವೂ ವಿವಿಧ ಬುಡಕಟ್ಟು ಸಮುದಾಯಗಳ ವೈವಿಧ್ಯಮಯ ಜನಸಂಖ್ಯೆಯ ನೆಲೆಯಾಗಿದೆ. ಪರಿಶಿಷ್ಟ ಪಂಗಡಗಳಿಗೆ ಸೇರಿದ 42,48,978 ಜನಸಂಖ್ಯೆಯನ್ನು ಹೊಂದಿದೆ. ಅಂದರೆ ಕರ್ನಾಟಕದ ಒಟ್ಟು ಜನಸಂಖ್ಯೆಯಲ್ಲಿ ಶೇ.6.95 ರಷ್ಟು ಜನಸಂಖ್ಯೆಯನ್ನು ಹೊಂದಿದೆ. ಈ ಸಮುದಾಯಗಳು ಬಡತನ, ಅನಕ್ಷರತೆ, ಆರೋಗ್ಯ ರಕ್ಷಣೆಯ ಕೊರತೆ ಮತ್ತು ಭೂಹೀನತೆಯಂತಹ ವಿವಿಧ ಸಾಮಾಜಿಕ–ಆರ್ಥಿಕ ಸವಾಲುಗಳನ್ನು ಎದುರಿಸುತ್ತಿವೆ. ಈ ಸಮಸ್ಯೆಗಳನ್ನು ಪರಿಹರಿಸಲು ಮತ್ತು

*Please cite this article as:* ಮಂಜುನಾಥ, ಜೆ. (2023). ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳ ಅಭಿವೃದ್ಧಿಯಲ್ಲಿ ಕರ್ನಾಟಕ ಸರ್ಕಾರದ ಪಾತ್ರ: (2018–2023). ಪ್ರತಿಬಿಂಬ: *ಮಲ್ಟಿಡಿಸಿಪ್ಲಿನರಿ ಕನ್ನಡ ರೀಸರ್ಚ್ ಜರ್ನಲ್ ಆಫ್ ಐಐಎಂಆರ್‌ಡಿ, 5(1). ಪು.ಸಂ.* 106–116

ಕರ್ನಾಟಕದಲ್ಲಿ ಪರಿಶಿಷ್ಟ ಪಂಗಡಗಳ ಸಮಗ್ರ ಅಭಿವೃದ್ಧಿಯನ್ನು ಉತ್ತೇಜಿಸಲು, ರಾಜ್ಯ ಸರ್ಕಾರವು ಹಲವಾರು ಉಪಕ್ರಮಗಳನ್ನು ಕೈಗೊಂಡಿದೆ. ಕರ್ನಾಟಕ ಸರ್ಕಾರವು ಬುಡಕಟ್ಟು ಸಮುದಾಯಗಳಿಗೆ ಶಿಕ್ಷಣ, ಆರೋಗ್ಯ, ವಸತಿ ಮತ್ತು ಜೀವನೋಪಾಯದ ಅವಕಾಶಗಳಿಗೆ ಉತ್ತಮ ಪ್ರವೇಶವನ್ನು ಒದಗಿಸಲು ವಿವಿಧ ಯೋಜನೆಗಳು ಮತ್ತು ಕಾರ್ಯಕ್ರಮಗಳನ್ನು ಜಾರಿಗೆ ತಂದಿದೆ. ಈ ಸಮುದಾಯಗಳ ಸಾಂಸ್ಕೃತಿಕ ಪರಂಪರೆಯನ್ನು ಸಂರಕ್ಷಿಸಲು ಮತ್ತು ಸಮಾಜದ ಮುಖ್ಯವಾಹಿನಿಯಲ್ಲಿ ಅವರ ಭಾಗವಹಿಸುವಿಕೆಯನ್ನು ಉತ್ತೇಜಿಸಲು ಸರ್ಕಾರವು ಹಲವಾರು ಯೋಜನೆಗಳನ್ನು ಪ್ರಾರಂಭಿಸಿದೆ. ಹೆಚ್ಚುವರಿಯಾಗಿ ಈ ಕಾರ್ಯಕ್ರಮಗಳ ಅನುಷ್ಠಾನವನ್ನು ಮೇಲ್ವಿಚಾರಣೆ ಮಾಡಲು ಮತ್ತು ಸಂಪನ್ಮೂಲಗಳ ಪರಿಣಾಮಕಾರಿ ಬಳಕೆಯನ್ನು ಖಚಿತಪಡಿಸಿಕೊಳ್ಳಲು ಸರ್ಕಾರವು ಬುಡಕಟ್ಟು ಕಲ್ಯಾಣ ಇಲಾಖೆಯಂತಹ ವಿವಿಧ ಸಂಸ್ಥೆಗಳು ಮತ್ತು ಸಂಸ್ಥೆಗಳನ್ನು ಸ್ಥಾಪಿಸಿದೆ. ಕರ್ನಾಟಕದಲ್ಲಿ ಪರಿಶಿಷ್ಟ ಪಂಗಡಗಳ ಒಟ್ಟಾರೆ ಯೋಗಕ್ಷೇಮವನ್ನು ಉತ್ತೇಜಿಸಲು ನೀತಿಗಳನ್ನು ರೂಪಿಸುವಲ್ಲಿ ಮತ್ತು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವಲ್ಲಿ ಇಲಾಖೆಗಳು ಪ್ರಮುಖ ಪಾತ್ರ ವಹಿಸುತ್ತಿವೆ. ಒಟ್ಟಾರೆಯಾಗಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿಯಲ್ಲಿ ಕರ್ನಾಟಕ ಸರ್ಕಾರದ ಪಾತ್ರವು ಈ ಸಮುದಾಯಗಳ ಸಮಗ್ರ ಬೆಳವಣಿಗೆಯನ್ನು ಖಾತ್ರಿಪಡಿಸುವಲ್ಲಿ ನಿರ್ಣಾಯಕವಾಗಿದೆ. ಮತ್ತು ಅವರು ಘನತೆ ಮತ್ತು ಸ್ವಾವಲಂಬನೆಯ ಜೀವನವನ್ನು ನಡೆಸಲು ಅನುವು ಮಾಡಿಕೊಡುತ್ತದೆ. ಪರಿಶಿಷ್ಟ ಪಂಗಡಗಳಲ್ಲಿ ಆರ್ಥಿಕ ಅಭಿವೃದ್ಧಿಯನ್ನು ಉತ್ತೇಜಿಸಲು ಸರ್ಕಾರವು ಹಲವಾರು ಯೋಜನೆಗಳನ್ನು ಜಾರಿಗೆ ತಂದಿದೆ. ಇವುಗಳಲ್ಲಿ ಐಟಿಐಗಳನ್ನು ಸ್ಥಾಪಿಸುವುದು, ಕೌಶಲ್ಯ ಅಭಿವೃದ್ಧಿ ಕೇಂದ್ರಗಳು ಮತ್ತು ಉದ್ಯಮಶೀಲತೆಗೆ ಹಣಕಾಸಿನ ನೆರವು ಒದಗಿಸುವುದು ಸೇರಿವೆ. ಪರಿಶಿಷ್ಟ ಪಂಗಡಗಳ ಆರೋಗ್ಯ ಮತ್ತು ನೈರ್ಮಲ್ಯವನ್ನು ಸುಧಾರಿಸುವ ಉದ್ದೇಶದಿಂದ ಸರ್ಕಾರವು ಹಲವಾರು ಆರೋಗ್ಯ ಮತ್ತು ನೈರ್ಮಲ್ಯ ಕಾರ್ಯಕ್ರಮಗಳನ್ನು ಪ್ರಾರಂಭಿಸಿದೆ. ಶುದ್ಧ ಕುಡಿಯುವ ನೀರು, ಶೌಚಾಲಯ ನಿರ್ಮಾಣ, ಆರೋಗ್ಯ ಶಿಬಿರಗಳನ್ನು ನಡೆಸುವುದು ಇವುಗಳಲ್ಲಿ ಸೇರಿವೆ. ಪರಿಶಿಷ್ಟ ಪಂಗಡದವರಿಗೆ ಭೂಮಿ ಮತ್ತು ಭೂಮಿಯ ಹಕ್ಕುಗಳ ಪ್ರವೇಶವನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ಕ್ರಮಗಳನ್ನು ಕೈಗೊಂಡಿದೆ. ಇದರಲ್ಲಿ ಭೂ ಹಕ್ಕುಪತ್ರ ನೀಡುವುದು, ಭೂರಹಿತ ಬುಡಕಟ್ಟುಗಳಿಗೆ ಭೂಮಿ ವಿತರಿಸುವುದು ಮತ್ತು ಭೂ ಬ್ಯಾಂಕ್‌ಗಳನ್ನು ಸ್ಥಾಪಿಸುವುದು ಸೇರಿದೆ. ಭೂ ಒಡೆತನ ಯೋಜನೆಯಡಿ ಘಟಕ ವೆಚ್ಚದ ಮೊತ್ತವನ್ನು 15 ಲಕ್ಷದಿಂದ 20 ಲಕ್ಷಕ್ಕೆ ಹಾಗೂ ಬೆಂಗಳೂರು ನಗರ, ಗ್ರಾಮಾಂತರ, ಚಿಕ್ಕಬಳ್ಳಾಪುರ, ರಾಮನಗರ ಜಿಲ್ಲೆಗಳಲ್ಲಿ 25 ಲಕ್ಷಕ್ಕೆ ಹೆಚ್ಚಿಸಲಾಗಿದೆ. ಹೀಗೆ ರಾಜ್ಯ ಸರ್ಕಾರವೂ ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗಾಗಿ ಹಲವು ಕ್ರಮಗಳನ್ನು ಕೈಗೊಳ್ಳುತ್ತಿದೆ.

**ಅಧ್ಯಯನದ ಉದ್ದೇಶಗಳು**

- ಕರ್ನಾಟಕ ಸರ್ಕಾರ ಜಾರಿಗೊಳಿಸಿರುವ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಸಂಬಂಧಿಸಿದ ಶೈಕ್ಷಣಿಕ ಯೋಜನೆಗಳನ್ನು ತಿಳಿಯುವುದು.
- ಕಳೆದ 5 ವರ್ಷಗಳ (2018–2023) ಆಳ್ವಿಕೆಯಲ್ಲಿ ರಾಜ್ಯ ಸರ್ಕಾರ ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗೆ ಕೈಗೊಂಡಿರುವ ಕ್ರಮಗಳನ್ನು ತಿಳಿಯುವುದು.

**ಅಧ್ಯಯನದ ವಿಧಾನ**

ಈ ಅಧ್ಯಯನವು ವಿವಿಧ ನಿಯತಕಾಲಿಕೆಗಳು, ವಿವಿಧ ಪುಸ್ತಕಗಳು ಮತ್ತು ಅಂತರ್ಜಾಲಗಳಿಂದ ಸಂಗ್ರಹಿಸಿದ ದ್ವಿತೀಯ ಮೂಲದ ಮಾಹಿತಿಯನ್ನು ಆಧರಿಸಿದೆ.

**ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳ ಅಭಿವೃದ್ಧಿಗಾಗಿ ಕರ್ನಾಟಕ ಸರ್ಕಾರ ಜಾರಿಗೊಳಿಸಿರುವ ಕಾರ್ಯಕ್ರಮಗಳು ಮತ್ತು ಯೋಜನೆಗಳು**

ಕರ್ನಾಟಕ ಸರ್ಕಾರವು ರಾಜ್ಯದಲ್ಲಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗೆ ಹಲವಾರು ಕಾರ್ಯಕ್ರಮಗಳನ್ನು ಕೈಗೊಂಡಿದೆ. ಕೆಲವು ಪ್ರಮುಖ ಕಾರ್ಯಕ್ರಮಗಳು ಇಲ್ಲಿವೆ.

**ಶಿಕ್ಷಣ**

ಬುಡಕಟ್ಟು ಪ್ರದೇಶಗಳಲ್ಲಿ ವಸತಿ ಶಾಲೆಗಳು ಮತ್ತು ಹಾಸ್ಟೆಲ್‌ಗಳನ್ನು ಸ್ಥಾಪಿಸುವ ಮೂಲಕ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಶಿಕ್ಷಣದ ಗುಣಮಟ್ಟವನ್ನು ಸುಧಾರಿಸಲು ಸರ್ಕಾರ ಗಮನಹರಿಸಿದೆ. ಎಸ್ಟಿ ಸಮುದಾಯದ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ಪಡೆಯಲು ಸರ್ಕಾರ ಆರ್ಥಿಕ ನೆರವು ನೀಡಿದೆ. ಪರಿಶಿಷ್ಟ ಪಂಗಡಗಳ ಜನರು ಆರ್ಥಿಕವಾಗಿ, ಸಾಮಾಜಿಕಾಗಿ ಹಾಗೂ ಶೈಕ್ಷಣಿಕವಾಗಿ ಬಹಳ ಹಿಂದುಳಿದವರಾಗಿದ್ದಾರೆ. ಇದಲ್ಲದೆ ಇಂದಿಗೂ ಶೇ.50–60 ರಷ್ಟು ಜನರು ಬಡತನರೇಖೆಗಿಂತ ಕೆಳಗಿನವರಾಗಿದ್ದಾರೆ. ಇವರನ್ನು ಬಡತನ ರೇಖೆಗಿಂತ ಮೇಲೆ ತರುವ ಉದ್ದೇಶದಿಂದ ಕರ್ನಾಟಕ ಸರ್ಕಾರ 1994–95 ನೇ ಸಾಲಿನಲ್ಲಿ ಸರ್ಕಾರದ ಆದೇಶ ಸಂಖ್ಯೆ ಸಕಇ 236 ಎಸ್‌ಇಟಿ 93 ದಿನಾಂಕ 30–08–94 ರ ಪ್ರಕಾರ ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯವನ್ನು ಮಂಜೂರು ಮಾಡಿತು. ಈ ನಿರ್ದೇಶನಾಲಯವನ್ನು 07–01–1999 ರಂದು ದಾವಣಗೆರೆಯಲ್ಲಿ ಪ್ರಾರಂಭಿಸಲಾಯಿತು. ತದನಂತರ ಆಡಳಿತಾತ್ಮಕ ಕಾರಣದಿಂದ ಅದನ್ನು ದಿನಾಂಕ: 29–02–2000 ರಿಂದ 2ನೇ ಮಹಡಿ, ಕೃಷಿ ಭವನ, ನೃಪತುಂಗ ರಸ್ತೆ, ಬೆಂಗಳೂರಿಗೆ ಸ್ಥಳಾಂತರಿಸಲಾಯಿತು. ಈ ಒಂದು ನಿರ್ದೇಶನಾಲಯದಿಂದ ಈ ಕೆಳಗಂಡ ಸವಲತ್ತುಗಳು ದೊರೆಯುತ್ತವೆ.

**ನರ್ಸರಿ ಮತ್ತು ಮಹಿಳಾ ಕಲ್ಯಾಣ ಕೇಂದ್ರಗಳು**

ಪರಿಶಿಷ್ಟ ಪಂಗಡದ ಮಕ್ಕಳಿಗೆ ಚಿಕ್ಕ ವಯಸ್ಸಿನಲ್ಲೆ ಶಾಲೆಗೆ ಹೋಗುವ ಅಭ್ಯಾಸ ರೂಢಿಸಲು ಈ ಯೋಜನೆಯನ್ನು ರೂಪಿಸಲಾಗಿದೆ. 3 ರಿಂದ 5 ವರ್ಷ ವಯಸ್ಸಿನ ಗಂಡು ಅಥವಾ ಹೆಣ್ಣು ಮಕ್ಕಳು ಇಂತಹ ಕೇಂದ್ರದಲ್ಲಿ ಪ್ರವೇಶ ಪಡೆಯಬಹುದು. ಪ್ರತಿ ಕೇಂದ್ರದಲ್ಲಿ 50 ಮಕ್ಕಳಿಗೆ ಪ್ರವೇಶಾವಕಾಶ ಇರುತ್ತದೆ. ಪ್ರತಿಯೊಂದು ಕೇಂದ್ರಕ್ಕೆ ಒಬ್ಬ ನಿರ್ವಾಹಕರು ಇರುತ್ತಾರೆ. ಇಲ್ಲಿ ಅಕ್ಷರಭ್ಯಾಸ, ನೀತಿಕಥೆ ಹಾಗೂ ಹಾಡುಗಳನ್ನು ಹೇಳಿಕೊಡಲಾಗುತ್ತದೆ. ರಾಜ್ಯದಲ್ಲಿ ಸುಮಾರು 70 ಕ್ಕಿಂತ ಹೆಚ್ಚು ನರ್ಸರಿ ಮತ್ತು ಮಹಿಳಾ ಕಲ್ಯಾಣ ಕೇಂದ್ರಗಳಿವೆ.

**ಆಶ್ರಮ ಶಾಲೆಗಳು**

ಪರಿಶಿಷ್ಟ ಪಂಗಡದ ಜನಾಂಗದ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಆಶ್ರಮ ಶಾಲೆಗಳನ್ನು ಸ್ಥಾಪಿಸಲಾಗಿದೆ. ಈ ಶಾಲೆಗೆ ಸೇರಬಯಸುವ ಮಕ್ಕಳ ವಯೋಮಿತಿ 5 ರಿಂದ 10 ವರ್ಷದೊಳಗಿನವರಾಗಿರಬೇಕು. 1–4 ನೇ

ತರಗತಿಯವರೆಗೆ ವಿದ್ಯಾಭ್ಯಾಸ ಮಾಡುವ ಅವಕಾಶ ಇದೆ. ಇಲ್ಲಿನ ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳು ಊಟವೂ ಉಚಿತವಾಗಿರುತ್ತದೆ. ಈ ವಿದ್ಯಾರ್ಥಿಗಳಿಗೆ ಉಚಿತವಾಗಿ ಊಟ, ವಸತಿ, ಪುಸ್ತಕ ಮುಂತಾದ ಸೌಲಭ್ಯಗಳನ್ನು ನೀಡಲಾಗುತ್ತದೆ.

**ಗೌರವಾನ್ವಿತ ವಿದ್ಯಾಸಂಸ್ಥೆಗಳಲ್ಲಿ ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ಪ್ರವೇಶ**

ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ಒಳ್ಳೆಯ ವಿದ್ಯಾಭ್ಯಾಸ ಕೊಡಿಸುವ ಉದ್ದೇಶದಿಂದ ಸರಕಾರವೂ ಮೈಸೂರಿನ ರಾಮಕೃಷ್ಣ ಆಶ್ರಮಕ್ಕೆ ಪ್ರತಿವರ್ಷ 2 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ನೀಡಲು 2000–2001 ರ ಸಾಲಿನಿಂದ ಕಾರ್ಯಕ್ರಮವನ್ನು ಹಾಕಿಕೊಂಡಿದೆ. ಪ್ರತಿವರ್ಷ ಏಪ್ರಿಲ್ 30 ರಂದು ನಡೆಸುವ ಪರೀಕ್ಷೆಯಲ್ಲಿ ತೇರ್ಗಡೆಯಾಗಬೇಕು. 7ನೇ ತರಗತಿಯಲ್ಲಿ ಪ್ರಥಮ ದರ್ಜೆಯಲ್ಲಿ ಪಾಸಾಗಿ 8ನೇ ತರಗತಿ ಸೇರುವವರಿಗೆ ಮಾತ್ರ ಇಲ್ಲಿ ಅವಕಾಶ ಇರುತ್ತದೆ. ಈ ವಿದ್ಯಾಸಂಸ್ಥೆಯಲ್ಲಿ ವಿದ್ಯಾಭ್ಯಾಸ ಮಾಡುವ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಎಲ್ಲಾ ಖರ್ಚುನ್ನು ಪರಿಶಿಷ್ಟ ಪಂಗಡ ಕಲ್ಯಾಣ ಇಲಾಖೆಯಿಂದ ಭರಿಸಲಾಗುತ್ತದೆ.

**ಮೆಟ್ರಿಕ್‌ಪೂರ್ವ ವಿದ್ಯಾರ್ಥಿ ನಿಲಯ**

ಶಾಲೆಗಳಲ್ಲಿ ಓದುತ್ತಿರುವ ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ವಸತಿ ಹಾಗೂ ಊಟದ ಸೌಕಾರ್ಯ ಒದಗಿಸಲು ವಿದ್ಯಾರ್ಥಿ ನಿಲಯಗಳನ್ನು ಸ್ಥಾಪಿಸಲಾಗಿದೆ. ಗ್ರಾಮಾಂತರ ಪ್ರದೇಶದ ಬಡಕುಟುಂಬದಿಂದ ಬಂದ ಮಕ್ಕಳಿಗೆ ಇದರಿಂದ ಉಪಯೋಗವಾಗುತ್ತಿದೆ. 5 ರಿಂದ 10 ನೇ ತರಗತಿಯವರೆಗೆ ಓದಲಿಚ್ಚಿಸುವ ವಿದ್ಯಾರ್ಥಿಗಳಾಗಿರಬೇಕು. ಗ್ರಾಮಾಂತರ ಪ್ರದೇಶದ ವಿದ್ಯಾರ್ಥಿಗಳಾಗಿರಬೇಕು ಹಾಗೂ ಅಂಗೀಕೃತ ವಿದ್ಯಾಸಂಸ್ಥೆಯಲ್ಲಿ ಓದುತ್ತಿರಬೇಕು. ಉಚಿತ ವಸತಿ ಮತ್ತು ಉಚಿತವಾಗಿ ಪುಸ್ತಕ, ಲೇಖನ ಸಾಮಗ್ರಿ, ಉಡುಪುಗಳನ್ನು ಕೊಡಲಾಗುವುದು.

**ಅನುದಾನಿತ ವಿದ್ಯಾರ್ಥಿನಿಲಯಗಳಿಗೆ ಧನ ಸಹಾಯ**

ವಿದ್ಯಾರ್ಥಿನಿಲಯಗಳನ್ನು ನಡೆಸುವ ಸ್ವಯಂ ಸೇವಾ ಸಂಸ್ಥೆಗಳಿಗೆ ಉತ್ತೇಜನ ನೀಡಲು ಖಾಸಗಿ ವಿದ್ಯಾರ್ಥಿ ನಿಲಯಗಳಿಗೂ ಧನ ಸಹಾಯ ನೀಡಲಾಗುತ್ತದೆ. ಸರಕಾರದ ವಸತಿ ನಿಲಯಗಳಿಗೆ ನೀಡುವ ಎಲ್ಲಾ ಸೌಲಭ್ಯಗಲನ್ನು ನೀಡಲಾಗುತ್ತದೆ.

**ವಿದ್ಯಾರ್ಥ್ಯಿ ವೇತನ ಮತ್ತು ಧನ ಸಹಾಯ**

ಸದರಿ ಕಾರ್ಯಕ್ರಮದಡಿ ಕಾನೂನು ತರಬೇತಿ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ 2 ವರ್ಷಗಳ ತರಬೇತಿ ಅವಧಿಯಲ್ಲಿ ಪ್ರತಿ ತಿಂಗಳು ರೂ.10.000/– ಗಳ ಶಿಷ್ಯವೇತನ ಪಾವತಿಸಲಾಗುತ್ತದೆ. ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ಪ.ವರ್ಗದ ದ್ವಿತಿಯ ಪಿ.ಯು.ಸಿ. ವಿದ್ಯಾರ್ಥಿಗಳಿಗೆ ರೂ.20.000/–, ಪದವಿ ವಿದ್ಯಾರ್ಥಿಗಳಿಗೆ ರೂ,25.000/–, ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳಿಗೆ ರೂ.30.000/– ಇಂಜಿನಿಯರಿಂಗ್, ಪಶುವೈದ್ಯಕೀಯ & ವೈದ್ಯಕೀಯ ವಿದ್ಯಾರ್ಥಿಗಳಿಗೆ ರೂ.35.000/– ಗಳಂತೆ ಪ್ರೋತ್ಸಾಹಧನ ನೀಡಲಾಗುತ್ತದೆ. ಪ.ವರ್ಗದ ಮಹಿಳೆ ಇತರೆ ಜಾತಿಯ ಪುರುಷನನ್ನು ಅಂತರ್ಜಾತಿ

ವಿವಾಹವಾದಲ್ಲಿ ರೂ.3.00 ಲಕ್ಷ ಹಾಗೂ ಪ.ವರ್ಗದ ಪುರುಷ ಇತರೆ ಜಾತಿಯ ಮಹಿಳೆಯನ್ನು ವಿವಾಹವಾದಲ್ಲಿ ರೂ.2.00 ಲಕ್ಷ ಪ್ರೋತ್ಸಾಹಧನ ನೀಡಲಾಗುತ್ತದೆ. ಮತ್ತು ಪರಿಶಿಷ್ಟ ವರ್ಗದ ಒಟ್ಟು 7 ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳ ನಿರ್ವಹಣೆ ಹಾಗೂ ಸದರಿ ವಿದ್ಯಾರ್ಥಿನಿಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ಸಿಬ್ಬಂದಿ ಮತ್ತು ಹೊರ ಗುತ್ತಿಗೆ ಸಿಬ್ಬಂದಿ ವರ್ಗದವರಿಗೆ ವೇತನ ಪಾವತಿಸಲಾಗುತ್ತದೆ.

**ಲ್ಯಾಪ್‌ಟಾಪ್ ಭಾಗ್ಯ-ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ಉಚಿತವಾಗಿ ಲ್ಯಾಪ್ಟಾಪ್ ವಿತರಿಸುವಿಕೆ**

ಈ ಯೋಜನೆಯ ಮೂಲಕ ರಾಜ್ಯದಲ್ಲಿ ಉನ್ನತ ವ್ಯಾಸಂಗವನ್ನು ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ಉಚಿತವಾಗಿ ಲ್ಯಾಪ್‌ಟಾಪ್‌ಗಳನ್ನು ವಿತರಿಸಲಾಗುವುದು. ಈ ಯೋಜನೆಯ ವ್ಯಾಪ್ತಿಗೆ ಸರ್ಕಾರಿ ಇಂಜಿನಿಯರಿಂಗ ಮಹಾವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳು ಬರುತ್ತಾರೆ. ಪ್ರತಿ ಲ್ಯಾಪ್‌ಟಾಪ್ ಬೆಲೆ 32,000 ರೂಗಳಿಂದ 35000 ರೂಗಳವರೆಗೆ ಇರುತ್ತದೆ. ಯೋಜನೆಯ ಫಲಾನುಭವಿ ವಿದ್ಯಾರ್ಥಿಯು ತನ್ನ ವ್ಯಾಸಂಗದ ಮೊದಲ ವರ್ಷದಲ್ಲಿರಬೇಕಾಗುತ್ತದೆ.

**ಇಲಾಖಾವಾರು ಶೈಕ್ಷಣಿಕ ಯೋಜನೆಗಳು ಮತ್ತು ಕಾರ್ಯಕ್ರಮಗಳು**

**ಉನ್ನತ ಶಿಕ್ಷಣ ಇಲಾಖೆಯ ಕಾರ್ಯಕ್ರಮಗಳು**

- ವಿಶ್ವವಿದ್ಯಾಲಯದ ವಿದ್ಯಾರ್ಥಿನಿಲಯಗಳಲ್ಲಿನ ಪ.ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಊಟದ ವೆಚ್ಚ ಭರಿಸುವುದು.

- ಪಿ.ಹೆಚ್.ಡಿ ವಿದ್ಯಾರ್ಥಿಗಳಿಗೆ ಮಾಸಿಕ ಗರಿಷ್ಠ ರೂ.10.000/– ಶಿಷ್ಯವೇತನ ನೀಡುವುದು (ವಿಶ್ವವಿದ್ಯಾಲಯ/ಸ್ನಾತಕೋತ್ತರ ಕೇಂದ್ರ/ಸಂಯೋಜಿತ) ಇತ್ಯಾದಿ ಕಾಲೇಜುಗಳಲ್ಲಿ ಪಿ.ಹೆಚ್.ಡಿ ಗೆ ಆಯ್ಕೆ ಮಾಡಿದ ವಿದ್ಯಾರ್ಥಿಗಳಿಗೆ.

- ಸರ್ಕಾರಿ ಆದೇಶದಂತೆ ಶುಲ್ಕ ಮರುಪಾವತಿ (ಕುಟುಂಬ ವಾರ್ಷಿಕ ಆದಾಯ ರೂ.2.50 ಲಕ್ಷದಿಂದ ಮೇಲ್ಪಟ್ಟ ರೂ.10.00 ಲಕ್ಷದವರೆಗೆ ಇಂಜಿನಿಯರಿಂಗ್ ಮತ್ತು ಇತರೆ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಮಾಡುವುದು.

- ಪ.ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಸಂಖ್ಯೆ ಶೇ.50 ಕ್ಕಿಂತ ಅಧಿಕವಾಗಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರತಿ ಕಾಲೇಜಿಗೆ 5 ರಂತೆ ಸ್ಮಾರ್ಟ್ ಕ್ಲಾಸ್‌ರೂಂಗಳ ಸ್ಥಾಪನೆ ( ಪ್ರತಿ ಸ್ಮಾರ್ಟ್ ಕ್ಲಾಸಿಗೆ ರೂ.65,700/–ರಂತೆ).

- ಇಂಜಿನಿಯರಿಂಗ್ ಮತ್ತು ಇತರೆ ಕೋರ್ಸ್ಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಾರ್ಷಿಕ ಆದಾಯ ಮಿತಿ ರೂ. 5.00 ಲಕ್ಷದೊಳಗಿನ ಪ.ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್‌ಗಳನ್ನು ಹಾಗೂ ಪುಸ್ತಕಗಳನ್ನು ಒದಗಿಸುವುದು.

- ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಮತ್ತು ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಇರುವ ಹಾಸ್ಟೆಲ್‌ಗಳಿಗೆ ಹೆಚ್ಚುವರಿ ಕೊಠಡಿಗಳ ನಿರ್ಮಾಣ ಮತ್ತು ಉಪಕರಣಗಳ ಸರಬರಾಜು.

**ಪ್ರಾಥಮಿಕ ಮತ್ತು ಮಾಧ್ಯಮಿಕ ಶಿಕ್ಷಣ ಇಲಾಖೆಯ ಕಾರ್ಯಕ್ರಮಗಳು**

- ಪ.ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು 50% ಹೆಚ್ಚಿನ ಸಂಖ್ಯೆಯಲ್ಲಿ ಇರುವ ಶಾಲೆಗಳನ್ನು ಮತ್ತು ಕಾಲೋನಿಗಳಲ್ಲಿರುವ ಶಾಲೆಗಳ ದುರಸ್ತಿ.
- ಆರ್.ಟಿ.ಇ ಅಡಿ ಖಾಸಗಿ ಶಾಲೆಗಳಲ್ಲಿ ಓದುತ್ತಿರುವ ಪ.ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ.
- ವಿದ್ಯಾವಿಕಾಸ ಯೋಜನೆ–ಸೈಕಲ್ ವಿತರಣೆ, ಸಮವಸ್ತ್ರ, 8 ರಿಂದ 10ನೇ ತರಗತಿಯವರೆಗೆ ಪಠ್ಯ/ನೋಟ್ ಪುಸ್ತಕಗಳ ವಿತರಣೆ ಇತ್ಯಾದಿ.
- ಪ.ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಪರೀಕ್ಷಾ ಶುಲ್ಕ ಭರಿಸುವುದು.
- ಮೀಸಲು ಕ್ಷೇತ್ರಗಳಲ್ಲಿ ಗ್ರಂಥಾಲಯಗಳ ಅಭಿವೃದ್ಧಿ.
- ಮಧ್ಯಾಹ್ನದ ಬಿಸಿ ಊಟ ಮತ್ತು ಕ್ಷೀರ ಭಾಗ್ಯ

**ಕೌಶಲ್ಯಾಭಿವೃದ್ಧಿ ಇಲಾಖೆಯ ಕಾರ್ಯಕ್ರಮಗಳು**

- ಪ.ಜಾತಿ/ಪರಿಶಿಷ್ಟ ಪಂಗಡದ ನಿರುದ್ಯೋಗಿಗಳಿಗೆ ಕೌಶಲ್ಯ ಅಭಿವೃದ್ಧಿ ತರಬೇತಿ ನೀಡುವುದು.
- ಪ.ಜಾತಿ/ಪರಿಶಿಷ್ಟ ಪಂಗಡದ ಐ.ಟಿ.ಐ ವಿದ್ಯಾರ್ಥಿಗಳಿಗೆ ಟೂಲ್‌ಕಿಟ್ , ಬ್ಯಾಗ್, ನೋಟ್‌ಬುಕ್, ಲೇಖನ ಸಾಮಾಗ್ರಿ, ಓಡಿಠಣಜಭಿಣುತಜ ರಜಚಿಡಿ ವಿತರಣೆ.
- ಪ.ಜಾತಿ/ಪರಿಶಿಷ್ಟ ಪಂಗಡದ ಡಿಪ್ಲೊಮಾ/ಪೋಸ್ಟ್ ಡಿಪ್ಲೊಮಾ/ಎಂ.ಟೆಕ್ ವಿದ್ಯಾರ್ಥಿಗಳಿಗೆ ತರಬೇತಿಯೊಂದಿಗೆ ಕಿಟ್ ಮತ್ತು ಪುಸ್ತಕಗಳ ವಿತರಣೆ.

**ಕೈಮಗ್ಗ ಮತ್ತು ಜವಳಿ ಇಲಾಖೆಯ ಕಾರ್ಯಕ್ರಮಗಳು**

- ಕೆ.ಹೆಚ್.ಡಿ.ಸಿ ಯಿಂದ ಪ.ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿನಿಲಯಗಳು/ವಸತಿ ಶಾಲೆಗಳಿಗೆ ಬೆಡ್‌ಶೀಟ್.ಜಮಖಾನ, ಟವಾಲ್ ಸರಬರಾಜು.

**ಪ್ರವಾಸೋದ್ಯಮ ಇಲಾಖೆಯ ಕಾರ್ಯಕ್ರಮಗಳು**

- ಕರ್ನಾಟಕ ದರ್ಶನ ಕಾರ್ಯಕ್ರಮದಡಿ 8ನೇ ತರಗತಿ ಓದುತ್ತಿರುವ ಸರ್ಕಾರಿ ಶಾಲೆಗಳ ಮತ್ತು ಕ್ರೈಸ್ತ್ ವಸತಿ ಶಾಲೆಗಳ ಪ.ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಪ್ರವಾಸ ಕಾರ್ಯಕ್ರಮ ಏರ್ಪಡಿಸುವುದು.

**ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಾರ್ಯಕ್ರಮಗಳು**

- ಅಂತರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಅಧಿಕೃತ ಕ್ರೀಡೆಗಳಲ್ಲಿ ಪದಕ ವಿಜೇತರಾದ ಪ.ಜಾತಿ/ಪರಿಶಿಷ್ಟ ಪಂಗಡದ ಕ್ರೀಡಾಪಟುಗಳಿಗೆ ತಲಾ ಕ್ರಮವಾಗಿ ರೂ.5.00 ಲಕ್ಷ, ರೂ,3.00 ಲಕ್ಷ, ರೂ,1.00 ಲಕ್ಷದಂತೆ ಪ್ರೋತ್ಸಾಹಧನ ನೀಡುವುದು.
- ಕ್ರೀಡಾ ಶಾಲೆಗಳ ಕ್ರೀಡಾಪಟುಗಳಿಗೆ ಪೌಷ್ಠಿಕ ಆಹಾರ, ಸಮವಸ್ತ್ರ, ಕ್ರೀಡಾ ಗಂಟು ಇತ್ಯಾದಿ.
- ಜಿಮ್ ಸ್ಥಾಪನೆಗೆ ಸಹಾಯಧನ.
- ಯುವಜನ ಮೇಳದಲ್ಲಿ ಪ್ರಥಮ, ದ್ವಿತೀಯ, ತೃತೀಯ ಸ್ಥಾನ ಪಡೆದವರಿಗೆ ಪ್ರೋತ್ಸಾಹಧನ.

**ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಾರ್ಯಕ್ರಮಗಳು**

- ಕನ್ನಡ ಪಿ.ಹೆಚ್.ಡಿ ಮತ್ತು ಎಂ.ಫಿಲ್ ಪದವೀಧರರಿಗೆ ಹಸ್ತಪ್ರತಿಗಳ ಮುದ್ರಣಕ್ಕೆ ಧನಸಹಾಯ
- ಪ.ಜಾತಿ/ಪರಿಶಿಷ್ಟ ಪಂಗಡದ ಪಿ.ಹೆಚ್.ಡಿ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾಲಯದಲ್ಲಿ ಕಾರ್ಯಾಗಾರ/ವಿಚಾರ ಸಂಕೀರಣ ಏರ್ಪಡಿಸುವುದು.
- ಪ.ಜಾತಿ/ಪರಿಶಿಷ್ಟ ಪಂಗಡದ ಪಿ.ಹೆಚ್.ಡಿ ವಿದ್ಯಾರ್ಥಿಗಳು . ಪ.ಜಾತಿ/ಪರಿಶಿಷ್ಟ ಪಂಗಡಕ್ಕೆ ಸಂಬಂಧಿಸಿದ ವ್ಯಕ್ತಿಗಳ ಸಂಶೋಧನಾ ಪ್ರಬಂಧವನ್ನು ಪ್ರಕಟಿಸಲು ಅನುದಾನ ನೀಡುವುದು.

**ಕಾನೂನು ಇಲಾಖೆಯ ಕಾರ್ಯಕ್ರಮಗಳು**

- ಪ.ಜಾತಿ/ಪ.ಪಂಗಡದ ಕಾನೂನು ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ / ಇ–ನೋಟ್‌ಪ್ಯಾಡ್ಗಳ ವಿತರಣೆ.

**ಸಮಾಜ ಕಲ್ಯಾಣ ಇಲಾಖೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ಕಾರ್ಯಕ್ರಮಗಳು**

- ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ನಿರ್ವಾಹಣೆ
- ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ–ಡೇ ಸ್ಕಾಲರ್‌ಶಿಪ್ ಮತ್ತು ಹಾಸ್ಟೆಲ್‌ಗಳಲ್ಲಿ ಇರುವ ವಿದ್ಯಾರ್ಥಿಗಳಿಗೆ ಭೋಜನ ವೆಚ್ಚ ಭರಿಸಲು.
- ಪ್ರೋತ್ಸಾಹಧನ– ಎಸ್.ಎಸ್.ಎಲ್.ಸಿ ಮತ್ತು ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ಪ್ರಥಮ ದರ್ಜೆಯಲ್ಲಿ ಪ್ರಥಮ ಪ್ರಯತ್ನದಲ್ಲಿ ಉತ್ತೀರ್ಣರಾದವರಿಗೆ.
- ರಾಷ್ಟ್ರೀಯ ಮಟ್ಟದ ಶೈಕ್ಷಣಿಕ ಸಂಸ್ಥೆಗಳಾದ ಐ.ಐ.ಟಿ/ಐ.ಐ.ಎಂ/ ಏಮ್ಸ್/ ಎನ್.ಐ.ಟಿ ಗಳಲ್ಲಿ ಪ್ರವೇಶ ಪಡೆದವರಿಗೆ ಪೋತ್ಸಾಹಧನ.
- ಪ್ರಬುದ್ಧ ಯೋಜನೆಯಡಿ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಪ್ರವೇಶ ಪಡೆದವರಿಗೆ ಧನ ಸಹಾಯ.

**5 ವರ್ಷಗಳ (2018–2023) ಆಳ್ವಿಕೆಯಲ್ಲಿ ರಾಜ್ಯ ಸರ್ಕಾರ ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗೆ ಕೈಗೊಂಡಿರುವ ಕ್ರಮಗಳು**

**ಗಿರಿಜನ ಕಲ್ಯಾಣ**

ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗೆ ಒತ್ತು ನೀಡಲು ಸರ್ಕಾರ ಪ್ರತ್ಯೇಕ ಗಿರಿಜನ ಕಲ್ಯಾಣ ಇಲಾಖೆಯನ್ನು ಸ್ಥಾಪಿಸಿದೆ. ವಸತಿ ಯೋಜನೆಗಳು, ಪೌಷ್ಟಿಕಾಂಶ ಕಾರ್ಯಕ್ರಮಗಳು ಮತ್ತು ಸಾಮಾಜಿಕ ಭದ್ರತಾ ಯೋಜನೆಗಳು ಸೇರಿದಂತೆ ಪರಿಶಿಷ್ಟ ಪಂಗಡಗಳ ಜೀವನ ಮಟ್ಟವನ್ನು ಸುಧಾರಿಸುವ ಗುರಿಯನ್ನು ಹೊಂದಿರುವ ಹಲವಾರು ಯೋಜನೆಗಳನ್ನು ಇಲಾಖೆಯು ಜಾರಿಗೊಳಿಸುತ್ತದೆ. ಒಟ್ಟಾರೆಯಾಗಿ, ಕರ್ನಾಟಕದ ಬಿಜೆಪಿ ಸರ್ಕಾರವು ರಾಜ್ಯದಲ್ಲಿ ಪರಿಶಿಷ್ಟ ಪಂಗಡಗಳ ಸಾಮಾಜಿಕ–ಆರ್ಥಿಕ ಪರಿಸ್ಥಿತಿಗಳನ್ನು ಸುಧಾರಿಸಲು ಹಲವಾರು ಕ್ರಮಗಳನ್ನು ಕೈಗೊಂಡಿದೆ. ಇನ್ನೂ ಹೆಚ್ಚಿನ ಕೆಲಸಗಳನ್ನು ಮಾಡಬೇಕಾಗಿದ್ದರೂ, ಈ ಕ್ರಮಗಳು ಸಮುದಾಯಕ್ಕೆ ಅಗತ್ಯವಿರುವ ಕೆಲವು ಬೆಂಬಲವನ್ನು ಒದಗಿಸಿವೆ.

ಪರಿಶಿಷ್ಟರ ಬದುಕು ಸುಧಾರಣೆ, ಹಕ್ಕುಗಳ ರಕ್ಷಣೆ, ಆಶೋತ್ತರಗಳಿಗೆ ಸ್ಪಂಧನೆ ವಿಚಾರದಲ್ಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಕೊಡುಗೆ ಗಣನೀಯ. ಜನಾಂಗ ಜಾಗೃತವಾಗಿದ್ದು, ಜಾಗತೀಕರಣದ ನಂತರ ಅವರ ಆಶೋತ್ತರಗಳು ಹೆಚ್ಚಾಗಿವೆ. ಅದಕ್ಕೆ ತಕ್ಕಂತೆ ಬೊಮ್ಮಾಯಿ ಸರ್ಕಾರ ಕೆಲಸ ಮಾಡಿದೆ. ಮುಖ್ಯಮಂತ್ರಿ ಗಾದಿಯಲ್ಲಿ ಕುಳಿತುಕೊಂಡು ಬೆನ್ನಲ್ಲೆ ಬೊಮ್ಮಾಯಿ, ಪರಿಶಿಷ್ಟ ವರ್ಗಗಳ ಕಲ್ಯಾಣಕ್ಕೆ ಪ್ರತ್ಯೇಕ ಸಚಿವಾಲಯ ಘೋಷಿಸಿದ್ದರು. ಆ ಮೂಲಕ ಪರಿಶಿಷ್ಟ ವರ್ಗಗಳ ಸಮಗ್ರ ಅಭಿವೃದ್ಧಿಯ ಬದ್ಧತೆಯನ್ನು ಪ್ರದರ್ಶಿಸಿದ್ದರು. ಆಡಳಿತಾವಧಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಾಮಾಜಿಕ, ಶೈಕ್ಷಣಿಕ, ಹಾಗೂ ಆರ್ಥಿಕ ಪ್ರಗತಿಗೆ ಶಿಕ್ಷಣ, ಉದ್ಯೋಗ, ಸಬಲೀಕರಣ ಎಂಬ "ತ್ರಿ" ಸೂತ್ರದಲ್ಲಿ ಹೊಸ ಯೋಜನೆಗಳನ್ನು ರೂಪಿಸಿದ್ದಾರೆ. ಜಾರಿಯಲ್ಲಿರುವ ಯೋಜನೆಗಳನ್ನು ಸರಳಗೊಳಿಸುವ, ಸುಗಮಗೊಳಿಸುವ ವಿನೂತನ ಕಾರ್ಯಕ್ರಮಗಳನ್ನೂ ರೂಪಿಸಿದ್ದಾರೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಸಂಖ್ಯೆಗೆ ಅನುಗುಣವಾಗಿ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಉಪಯೋಜನೆ (ಟಿಎಸ್‌ಪಿ ಕಾಯ್ದೆ–2013) ರ ಅನುಷ್ಠಾನದ ವರ್ಷಗಳಲ್ಲಿ ಅನುದಾನ ಮೀಸಲಿಟ್ಟು ಹಲವು ಯೋಜನೆಗಳನ್ನು ಜಾರಿಗೊಳಿಸಲಾಗಿದೆ. 2022–23 ರಲ್ಲಿ 29 ಸಾವಿರ ಕೋಟಿಯನ್ನು ಈ ಉದ್ದೇಶಕ್ಕಾಗಿ ಮೀಸಲಿಡಲಾಗಿತ್ತು. ಮುಂಬರುವ 2023–24 ರ ಸಾಲಿನಲ್ಲಿ ಪರಿಶಿಷ್ಟ ಜಾತಿ ಉಪ ಯೋಜನೆಗೆ 21,343 ಕೋಟಿ ಮತ್ತು ಪರಿಶಿಷ್ಟ ಪಂಗಡ ಉಪ ಯೋಜನೆಗೆ 8872 ಕೋಟಿ ಸೇರಿ ಒಟ್ಟು 30,215 ಕೋಟಿ ಒದಗಿಸಲಾಗಿದೆ. ಅಷ್ಟೆ ಅಲ್ಲ ಈ ಕಾಯ್ದೆ ಅಡಿ ಒದಗಿಸಿದ ಅನುದಾನ ಅನ್ಯ ಉದ್ದೇಶಕ್ಕೆ ಬಳಕೆ ಆಗಬಾರದು. ಆದರೆ, ಕಾಯ್ದೆಯ ಸೆಕ್ಷನ್ 7(ಡಿ) ಅಂಥ ಉದ್ದೇಶಕ್ಕೆ ಅವಕಾಶ ಮಾಡಿಕೊಡುವ ಕಾರಣ ಅದನ್ನು ಪರಿಷ್ಕರಿಸಲು ಅವರು ಮುಂದಾಗಿದ್ದಾರೆ. ಅಲ್ಲದೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಜಮೀನನ್ನು ಸಂರಕ್ಷಿಸಲು ಈಗಿರುವ ಕಾನೂನು ತೊಡಕುಗಳನ್ನು ನಿವಾರಿಸಲು ಪಿಟಿಸಿಎಲ್ ಕಾಯ್ದೆಗೆ ಸೂಕ್ತ ತಿದ್ದುಪಡಿ ತರಲು ಕೂಡಾ ಬೊಮ್ಮಾಯಿ ನಿರ್ಧಾರಿಸಿದ್ದರು.

ಅಮೃತ ಜ್ಯೋತಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಬಿಪಿಎಲ್ ಕುಟುಂಬಗಳಿಗೆ ಮಾಸಿಕ 75 ಯುನಿಟ್ ಉಚಿತ ವಿದ್ಯುತ್ ಸೌಲಭ್ಯ ಕಲ್ಪಿಸಲಾಗಿದೆ. ಗ್ರಾಮೀಣ ಪ್ರದೇಶದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ವಸತಿ ಯೋಜನೆಗಳಲ್ಲಿ ಘಟಕ ಸಹಾಯಧನ 1,75 ಲಕ್ಷದಿಂದ 2 ಲಕ್ಷಕ್ಕೆ ಹೆಚ್ಚಳ ಮಾಡಲಾಗಿದೆ. 100 ಅಂಬೇಡ್ಕರ್ ಹಾಸ್ಟೆಲ್‌ಗಳ ನಿರ್ಮಾಣವನ್ನೂ ಕೈಗೆತ್ತಿಕೊಳ್ಳಲಾಗಿದ್ದು, ಪ್ರಬುದ್ಧ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ 133 ವಿದ್ಯಾರ್ಥಿಗಳನ್ನು ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ಶಿಕ್ಷಣಕ್ಕೆ ಪ್ರಾಯೋಜಿಸಲಾಗಿದೆ.

ವಿವಿಧ ಇಲಾಖೆಗಳ ಅಭಿವೃದ್ಧಿ ನಿಗಮಗಳ ಆರ್ಥಿಕ ಅಭಿವೃದ್ಧಿ ಕಾರ್ಯಕ್ರಮಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಮಹಿಳೆಯರಿಗೆ ಶೇ 25 ಪಾಲು ಮೀಸಲಿರಿಸಲಾಗಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಸೇರಿದ ವಿವಿಧ ಆರು ಅಭಿವೃದ್ಧಿ ನಿಗಮಗಳಿಗೆ ಪ್ರಸಕ್ತ ಸಾಲಿನಲ್ಲಿ ನೀಡುತ್ತಿರವ ಅನುದಾನವನ್ನು ಗಣನೀಯವಾಗಿ ಹೆಚ್ಚಿಸಿ ಪ್ರಸಕ್ತ ಸಾಲಿನಲ್ಲಿ 795 ಕೋಟಿ ಒದಗಿಸಲು ಬೊಮ್ಮಾಯಿ ನಿರ್ಧಾರಿಸಿದ್ದಾರೆ. ಗಂಗಾ ಕಲ್ಯಾಣ ಯೋಜನೆಯ ಅನುಷ್ಠಾನವು ಬೇರೆ ಬೇರೆ ಕಾರಣಗಳಿಂದ ವಿಳಂಬವಾಗುತ್ತಿದ್ದು, ಇದನ್ನು ಬಗೆಹರಿಸಿ ಇ–ರುಪಿ ಮೂಲಕ ಫಲಾನುಭವಿಗಳಿಗೆ ಹಣ ಪಾವತಿಸಲು ಕ್ರಮವಹಿಸಲಾಗಿದೆ. ಈ ಯೋಜನೆಯಡಿ 17,000 ಫಲಾನುಭವಿಗಳಿಗೆ 675 ಕೋಟಿ ಸಹಾಯಧನವನ್ನು ನೇರ ನಗದು ವರ್ಗಾವಣೆ (ಡಿಬಿಟಿ) ಮೂಲಕ ಅನುಷ್ಠಾನಗೊಳಿಸುವ ಗುರಿ ಹೊಂದಲಾಗಿದೆ.

ಪರಿಶಿಷ್ಟ ಜಾತಿ ಮತು ಪರಿಶಿಷ್ಟ ಪಂಗಡದ ಯುವಕರು ಸ್ವಯಂ ಉದ್ಯೋಗ ಕೈಗೊಳ್ಳಲು ವಿದ್ಯುತ್ ಚಾಲಿತ ತ್ರಿಚಕ್ರ ಸರಕು ವಾಹನ ಖರೀದಿಗೆ 50 ಸಾವಿರ ಧನ ಸಹಾಯ ನೀಡುವ ಕಾರ್ಯಕ್ರಮವನ್ನು ಬೊಮ್ಮಾಯಿ ಘೋಷಿಸಿದ್ದಾರೆ. ಈ ಯೋಜನೆಯನ್ನು ಮುಂದುವರೆಸಿ 'ಬಾಬು ಜಗಜೀವನ್‌ರಾಂ ಸ್ವಯಂ ಉದ್ಯೋಗ ಯೋಜನೆ'ಯಡಿಯಲ್ಲಿ ಎಲೆಕ್ಟ್ರಿಕ್ ತ್ರಿಚಕ್ರ ಅಥವಾ ನಾಲ್ಕು ಚಕ್ರದ ಸರಕು ವಾಹನಗಳನ್ನು ಖರೀದಿಸಲು ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 100 ಫಲಾನುಭವಿಗಳಿಗೆ ಶೇ 50 ರಷ್ಟು 2 ಲಕ್ಷದವರೆಗೂ ಸಹಾಯಧನ ನೀಡಲು ಬೊಮ್ಮಾಯಿ ಮುಂದಾಗಿದ್ದಾರೆ.

ಮೆಟ್ರಿಕ್ ನಂತರದಲ್ಲಿ ಶಾಲೆಯಿಂದ ಹೊರಗುಳಿಯುವಂಥ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಸಂಖ್ಯೆಯನ್ನು ತಗ್ಗಿಸಲು 100 ಕ್ರೈಸ್ ವಸತಿ ಶಾಲೆಗಳನ್ನು ಉನ್ನತೀಕರಿಸಲು ಪದವಿ ಪೂರ್ವ ಶಿಕ್ಷಣ ಆರಂಭಿಸಲು, ವಸತಿ ಶಾಲೆಗಳಲ್ಲಿನ ಕ್ರೀಡಾ ಪ್ರತಿಭೆಗಳಿಗೆ ಪ್ರೋತ್ಸಾಹ ನೀಡುವ ದೃಷ್ಟಿಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೂ ಸೇರಿದ ಒಟ್ಟು 10 ಕ್ರೈಸ್ ವಸತಿ ಶಾಲೆಗಳಲ್ಲಿ, ಒಂದು ಶಾಲೆಗೆ ಒಂದರಂತೆ, ಉತ್ಕೃಷ್ಟ ಮಟ್ಟದ ಕ್ರೀಡಾ ಸೌಲಭ್ಯವನ್ನು 10 ಕೋಟಿ ವೆಚ್ಚದಲ್ಲಿ ಒದಗಿಸಲು ಅವರು ಮುಂದಾಗಿದ್ದಾರೆ. ಪರಿಶಿಷ್ಟ ಪಂಗಡದ ಮಕ್ಕಳಿಗೆ ವಿದ್ಯಾರ್ಥಿನಿಲಯಗಳು ಇಲ್ಲದೇ ಇರುವ ಜಿಲ್ಲಾ ಕೇಂದ್ರಗಳಲ್ಲಿ 14 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು 6 ಕೋಟಿ ರೂ.ವೆಚ್ಚದಲ್ಲಿ ಆರಂಭಿಸಲಾಗುವುದು. ರಾಷ್ಟ್ರೀಯ ಶಿಕ್ಷಣ ಸಂಸ್ಥೆಗಳಾದ ಐಐಟಿ, ಐಐಎಂ, ಐಐಎಸ್‌ಸಿ, ಎನ್‌ಐಟಿ ಮುಂತಾದ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ 2 ಲಕ್ಷ ಪ್ರೋತ್ಸಹ ಧನ ನೀಡುತ್ತಿದ್ದು, ಆ ಮೊತ್ತವನ್ನು 4 ಲಕ್ಷಕ್ಕೆ ಹೆಚ್ಚಿಸಲಾಗುವುದು. ಐಸೆಕ್ ಸಂಸ್ಥೆಯಲ್ಲಿ ಪಿಹೆಚ್.ಡಿ ಮಾಡುವ

ಐವರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ಡಾ.ಬಿ.ಆರ್.ಅಂಬೇಡ್ಕರ್ ಫೆಲೋಶಿಪ್ ನೀಡಲು 2 ಕೋಟಿ ಕಾರ್ಪಸ್ ನಿಧಿ ಸ್ಥಾಪಿಸಲಾಗುತ್ತಿದೆ ಎಂದೂ ಬೊಮ್ಮಾಯಿ ಹೇಳಿದ್ದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿಗಳಿಗೆ ವಿವಿಧ ಆದಾಯ ಬರುವ ಚಟುವಟಿಕೆಯನ್ನು ಕೈಗೆತ್ತಿಕೊಳ್ಳಲು ವಾಣಿಜ್ಯ ಬ್ಯಾಂಕ್‌ಗಳಿಂದ ಪಡೆಯುವ ಗರಿಷ್ಠ 10 ಲಕ್ಷವರೆಗಿನ ಸಾಲವನ್ನು ಶೇ 4 ರಷ್ಟು ಬಡ್ಡಿ ದರದಲ್ಲಿ ದೊರಕಿಸಲು ಸರ್ಕಾರದ ವತಿಯಿಂದ ಬಡ್ಡಿ ಸಹಾಯಧನ ನೀಡಲಾಗುವುದು ಎಂದೂ ಬೊಮ್ಮಾಯಿ ಪ್ರಕಟಿಸಿದ್ದಾರೆ.

ಪರಿಶಿಷ್ಟ ಪಂಗಡ ಕಲ್ಯಾಣಕ್ಕಾಗಿ ಕಲ್ಯಾಣ ಮಿತ್ರ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಕಲ್ಯಾಣಕ್ಕಾಗಿ ಸರ್ಕಾರ ಜಾರಿಗೊಳಿಸಿರುವ ಯೋಜನೆಗಳ ಮಾಹಿತಿಯನ್ನು ಒಂದೇ ಸೂರಿನಡಿ ಒದಗಿಸುವ 'ಕಲ್ಯಾಣ ಮಿತ್ರಕ್ಕೆ (ಏಕೀಕೃತ ಎಸ್.ಸಿ/ಎಸ್.ಟಿ. 24/7 ಸಹಾಯವಾಣಿ–9482300400) ವರ್ಷದ ಹಿಂದೆಯೇ ಬೊಮ್ಮಾಯಿ ಚಾಲನೆ ನೀಡಿದ್ದಾರೆ. ಸಮಾಜ ಕಲ್ಯಾಣ ಇಲಾಖೆ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಕೆಯ ಸಚಿವಾಲಯದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಇಲಾಖೆಗಳು, ನಿಗಮ, ಮಂಡಳಿ, ಸಂಸ್ಥೆ, ಆಯೋಗಗಳ ಮೂಲಕ ಪಡೆದುಕೊಳ್ಳಬಹುದಾಗಿದೆ. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸರ್ಕಾರದ ಸೌಲಭ್ಯಗಳು ತಲುಪಿಸಲು ಅಧಿಕಾರಿಗಳು, ನೌಕರರು ವಿಳಂಬ ಧೋರಣೆ ತೋರದೆ, ಪ್ರಮಾಣಿಕವಾಗಿ, ಬದ್ಧತೆಯಿಂದ ಕಾರ್ಯನಿರ್ವಾಹಿಸಬೇಕು ಸಂಖ್ಯೆಗೆ ಕರೆ ಮಾಡಿದರೆ ನೆರವು ಸಿಗಬೇಕು ಎನ್ನುವುದು ಅವರ ಉದ್ದೇಶ.

**ಪರಿಶಿಷ್ಟ ಗುತ್ತಿಗೆದಾರರು, ಉದ್ಯಮಿಗಳಿಗೆ ಕೊಡುಗೆ:**

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಗುತ್ತಿಗೆದಾರರು ಮತ್ತು ಉದ್ಯಮಿಗಳಿಗೂ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೊಸ ಯೋಜನೆಗಳ ಮೂಲಕ ನೆರವು ನೀಡಿದ್ದಾರೆ. ಗುತ್ತಿಗೆಯಲ್ಲಿನ ಮೀಸಲಾತಿಗೆ ನಿಗದಿಪಡಿಸಿದ ಮೊತ್ತವನ್ನು ಹೆಚ್ಚಿಸಿ, ಇನ್ನಷ್ಟು ಗುತ್ತಿಗೆದಾರರಿಗೆ ಅವಕಾಶ ಕಲ್ಪಿಸುವ ಘೋಷಣೆ ಮಾಡಿದ್ದಾರೆ. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ (ತಿದ್ದುಪಡಿ) ಕಾಯ್ದೆಗೆ ತಿದ್ದುಪಡಿ ಮೂಲಕ 50 ಲಕ್ಷವರೆಗಿನ ಕಾಮಗಾರಿಗಳಲ್ಲಿ ಪರಿಶಿಷ್ಟ ಜಾತಿಗೆ ಶೇ.17.15 ಮೀಸಲಾತಿ ಹಾಗೂ ಪರಿಶಿಷ್ಟ ಪಂಗಡಕ್ಕೆ ಶೇ.6.95 ಮೀಸಲಾತಿ (ಒಟ್ಟು ಶೇ.24.1) ಕಲ್ಪಿಸಲಾಗಿದೆ. ಈ ಮೊತ್ತವನ್ನು 1 ಕೋಟಿಗೆ ಹೆಚ್ಚಿಸುವುದಾಗಿ ಬೊಮ್ಮಾಯಿ ಪ್ರಕಟಿಸಿರುತ್ತಾರೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಕೈಗಾರಿಕಾ ನಿವೇಶವನ್ನು ಶೇ 60 ರಷ್ಟು ಜಿಲ್ಲಾಮಟ್ಟದ ಏಕಗವಾಕ್ಷಿ ಸಮಿತಿಯಲ್ಲಿ ಹಾಗೂ ಶೇ 40 ರಷ್ಟುನ್ನು ರಾಜ್ಯ ಮಟ್ಟದ ಸಮಿತಿಯಲ್ಲಿ ಹಂಚಿಕೆ ಮಾಡಲಾಗುತ್ತಿದೆ. ಆದರೆ ದಲಿತ ಉದ್ದಿಮೆದಾರರ ಪೈಕಿ ಬಹುತೇಕರ ಯೋಜನಾ ವೆಚ್ಚ 15 ಕೋಟಿಗಿಂತ ಕಡಿಮೆ ಇರುವುದರಿಂದ ಜಿಲ್ಲಾಮಟ್ಟದಲ್ಲಿನ ಹಂಚಿಕೆ ಪ್ರಮಾಣ ಹೆಚ್ಚಿಸಬೇಕು ಎಂದು ದಲಿತ ಉದ್ಯಮಿಗಳ ನಿಯೋಗ ಮನವಿ ಮಾಡಿತ್ತು. ಅದಕ್ಕೆ ಸ್ಪಂದಿಸಿದ್ದ ಬೊಮ್ಮಾಯಿ, ಕೈಗಾರಿಕಾ ನಿವೇಶವನ್ನು ಜಿಲ್ಲಾಮಟ್ಟದಲ್ಲಿ ಶೇ 70 ರಷ್ಟು ಹಾಗೂ ರಾಜ್ಯ ಮಟ್ಟದಲ್ಲಿ ಶೇ 30 ರಷ್ಟು ಹಂಚಿಕೆ ಮಾಡಲು ಕ್ರಮ ಕೈಗೊಳ್ಳಬೇಕು ಅಧಿಕಾರಿಗಳಿಗೆ ಈಗಾಗಲೇ ಸೂಚಿಸಿದ್ದಾರೆ.

ಪರಿಶಿಷ್ಟ ಪಂಗಡದವರಿಗೆ ಪ್ರತ್ಯೇಕ ಸಚಿವಾಲಯವನ್ನು ಮುಖ್ಯಮಂತ್ರಿಯಾಗಿದ್ದ ಬಿ.ಎಸ್ ಯಡಿಯೂರಪ್ಪ "ವಾಲ್ಮೀಕಿ ಜಯಂತಿ" ಆಚರಣೆಯನ್ನು ಘೋಷಿಸಿದ್ದರು. ಪ್ರಧಾನಿಯಾಗಿದ್ದ ಅಟಲ್ ಬಿಹಾರಿ ವಾಜಪೇಯಿಯವರು ಕೇಂದ್ರ ಪರಿಶಿಷ್ಟ ಸಮುದಾಯಕ್ಕೆ ಪ್ರತ್ಯೇಕ ಸಚಿವಾಲಯ ಮಾಡಿದ್ದರು. ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ಬಳಿಕದ ಮೊದಲ ಸಂಪುಟದ ಮೊದಲ ಸಭೆಯಲ್ಲಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿಯನ್ನು ಮೇಲ್ವಿಚಾರಣೆ ಮಾಡಲು ಮತ್ತು ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಬಸವರಾಜ ಬೊಮ್ಮಾಯಿಯ ಅವರು ರಾಜ್ಯದಲ್ಲಿ ಪ್ರತ್ಯೇಕ ಸಚಿವಾಲಯ ಸ್ಥಾಪಿಸುವ ನಿರ್ಧಾರವನ್ನು ಪ್ರಕಟಿಸಿರುತ್ತಾರೆ.

**ಉಪಸಂಹಾರ**

ಕರ್ನಾಟಕ ಸರ್ಕಾರವು ರಾಜ್ಯದ ಪರಿಶಿಷ್ಟ ಪಂಗಡಗಳ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರ ವಹಿಸಿದೆ. ಹಲವಾರು ಕಾರ್ಯಕ್ರಮಗಳು ಮತ್ತು ಉಪಕ್ರಮಗಳ ಮೂಲಕ, ಬುಡಕಟ್ಟು ಜನರ ಶೈಕ್ಷಣಿಕ, ಆರ್ಥಿಕ ಮತ್ತು ಸಾಮಾಜಿಕ ಸ್ಥಾನಮಾನವನ್ನು ಸುಧಾರಿಸಲು ಸರ್ಕಾರ ಕೆಲಸ ಮಾಡಿದೆ. ಆದಾಗ್ಯೂ, ಇನ್ನೂ ಮಾಡಬೇಕಾದ ಕೆಲಸ ಬಹಳಷ್ಟಿದೆ. ಸರ್ಕಾರ ಜಾರಿಗೊಳಿಸಿರುವ ಯೋಜನೆಗಳ ಬಗ್ಗೆ ತಳಮಟ್ಟದವರೆಗೂ ವ್ಯವಸ್ಥಿಯವಾಗಿ ಜನರಿಗೆ ಅರಿವು ಮೂಡಿಸಬೇಕಾಗಿದೆ. ಹಾಗೂ ಸಂಬಂಧಪಟ್ಟ ಎಲ್ಲಾ ಇಲಾಖೆಗಳು, ನಿಗಮಗಳು, ಬೋರ್ಡ್‌ಗಳು ಪಾರದರ್ಶಕವಾಗಿ ಕೆಲಸ ಮಾಡಬೇಕಾಗಿದೆ, ಅನುದಾನದ ಮೊತ್ತ ಹೆಚ್ಚು ಮಾಡಬೇಕು, ಅನುದಾನದ ಮೊತ್ತ ಸಮಪರ್ಕವಾಗಿ ಬಳಕೆಯಾಗಬೇಕು ಆಗ ಮಾತ್ರ ಈ ಸಮುದಾಯದವರು ಸಾಮಾಜಿಕ ನ್ಯಾಯವನ್ನು ಸರ್ಕಾರದಿಂದ ನಿರೀಕ್ಷೆ ಮಾಡಬಹುದು. ಕರ್ನಾಟಕ ಸರ್ಕಾರವು ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗಾಗಿ ಕಾರ್ಯಕ್ರಮಗಳು ಮತ್ತು ಉಪಕ್ರಮಗಳಲ್ಲಿ ಹೂಡಿಕೆ ಮಾಡುವುದನ್ನು ಮುಂದುವರಿಸಬೇಕಾಗಿದೆ, ಇದರಿಂದ ಅವರು ರಾಜ್ಯದ ಸಾಮಾಜಿಕ–ಆರ್ಥಿಕ ಅಭಿವೃದ್ಧಿಯಲ್ಲಿ ಸಂಪೂರ್ಣವಾಗಿ ಭಾಗವಹಿಸಬಹುದು.

**ಪರಾಮರ್ಶನ ಗ್ರಂಥಗಳು**


- ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಕರ್ನಾಟಕ. (2023). https://tw.kar.nic.in/indexKan.aspx
- ಸಮಾಜ ಕಲ್ಯಾಣ ಇಲಾಖೆ, ಕರ್ನಾಟಕ. (2023). https://sw.kar.nic.in/
- Handbook on the guidelines to be followed by the State level officers and District/Taluk Monitoring Committees regarding review of the implementation of SCSP/TSP Schemes by various departments. https://www.scsptsp.karnataka.gov.in/
- *Ministry of Tribal Affairs, Government of India*. https://tribal.nic.in/
- *SCSP-TSP*. (2022). https://www.scsptsp.karnataka.gov.in/